ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ದೇವಸ್ಥಾನಗಳ ಭೂಮಿಯ ಕುರಿತು

ಶ್ರೀಎನ್. ರವಿಕುಮಾರ್(ವಿಧಾನ ಸಭೆಯಿಂದಚುನಾಯಿತರಾದವರು):-

412 (315) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭೂ ಸುಧಾರಣಾ ಕಾಯ್ದೆಯ ಅನ್ವಯ ಉಳುವವನೇ ಹೊಲದೊಡೆಯ ಎಂಬ ಕಾರಣಕ್ಕಾಗಿ ರಾಜ್ಯದ ಮುಜರಾಯಿ ಇಲಾಖೆಯ ದೇವಸ್ಥಾನಗಳಿಗೆ ಸೇರಿದ ಎಷ್ಟು ಎಕರೆ ಭೂಮಿಯನ್ನು ಇದುವರೆಗೆ ಪರಭಾರೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಉಳುವವನೇ ಹೊಲದೊಡೆಯ ಎಂಬ ಕಾರಣಕ್ಕಾಗಿ ಕೃಷಿ ಚಟುವಟಿಕೆಗಳನ್ನು ಉತ್ತೇಜಿಸುವ ಸಲುವಾಗಿ ದೇವಸ್ಥಾನಗಳ ಉಂಬಳಿ ಭೂಮಿಯನ್ನು ಪರಭಾರೆ ಮಾಡಿರುವ ಎಷ್ಟು ಎಕರೆ ಭೂ ಪ್ರದೇಶದಲ್ಲಿ ಇಂದಿಗೂ ಕೃಷಿ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ ;

(ಇ) ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ, ಸದರಿ ಭೂಮಿಯನ್ನು ಕೃಷಿಯೇತರ ಉದ್ದೇಶಗಳಿಗಾಗಿ ಎಷ್ಟು ಎಕರೆ ಭೂಮಿಯನ್ನು ಪರಿವರ್ತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸದರಿ ಭೂಮಿಯಲ್ಲಿ ಕೃಷಿ ಚಟುವಟಿಕೆ ನಡೆಸದೆ ಮಾರಾಟ ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಕಾಯ್ದೆಯನ್ನು ಉಲ್ಲಂಘಿಸಿರುವವರ ವಿರುದ್ಧ ಭೂಮಿಯನ್ನು ಹಿಂಪಡೆಯಲು ಸರ್ಕಾರ ಕೈಗೊಂಡ ಕ್ರಮವೇನು ?